# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹಿರಿಯೂರು.

## ಸಿ.ಸಿ ನಂಃ 1380/2022

| | | |
|---|---|---|
| ಸಾಕ್ಷಿದಾರರ ಹೆಸರು | - ರಂಗಸ್ವಾಮಿ | ಸಿಡಬ್ಲ್ಯೂ-5 |
| ತಂದೆಯ/ಗಂಡನ ಹೆಸರು | - ದೊಡ್ಡಮಲ್ಲಪ್ಪ | ಪಿ.ಡಬ್ಲ್ಯೂ-7 |
| ವಯಸ್ಸು | - 34 ವರ್ಷ | ಪ್ರ.ವ.ಬೋ ದಿನಾಂಕಃ09.04.2025 |
| ಉದ್ಯೋಗ | - ಬಡಿಗೆ ಕೆಲಸ | |
| ವಾಸ | - ಲಕ್ಕನಹಳ್ಳಿ ಗ್ರಾಮ. | |

**<u>ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಎಪಿಪಿಯವರಿಂದಃ-</u>**

1. ಮೃತ ಶಿವಮೂರ್ತಿ ಅವರು ನನಗೆ ಗೊತ್ತಿಲ್ಲ. ಆರೋಪಿಯ ಪರಿಚಯ ಇಲ್ಲ.

2. ಅಪಘಾತ ಹೇಗೆ ಆಯಿತು, ಯಾರ ತಪ್ಪಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿಯನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲುಃ ಮಾನ್ಯ ಎಪಿಪಿಯವರಿಂದಃ-**

1. ದಿನಾಂಕಃ 19.05.2022 ರಂದು ನಾನು ಮತ್ತು ಆರೋಪಿ KA-02-EH-4137 ಮೋಟಾರ್ ಸೈಕಲ್‌ನಲ್ಲಿ ಅಮರಾಪುರಕ್ಕೆ ಹೋಗುತ್ತಿರುವಾಗ ಬೆ.10.20 ಗಂಟೆ ಸಮಯದಲ್ಲಿ

ಧರ್ಮಪುರ ಕೆರೆ ಏರಿ ಪಕ್ಕ ಹೋಗುತ್ತಿರುವಾಗ , ಪಿ ಡಿ ಕೋಟೆ ಕಡೆಯಿಂದ ಬರುತ್ತಿದ್ದ KA-16-X-5862 ಮೋಟಾರ್ ಸೈಕಲ್‌ಗೆ ಆರೋಪಿಯು ತನ್ನ ಮೋಟಾರ್ ಸೈಕಲ್‌ನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಶಿವಮೂರ್ತಿ ಅವರ ಮೋಟಾರ್ ಸೈಕಲ್‌ಗೆ ಡಿಕ್ಕಿ ಪಡಿಸಿದ ಎಂದರೆ ಸರಿಯಲ್ಲ. ಪರಿಣಾಮವಾಗಿ ಶಿವಮೂರ್ತಿಯ ತಲೆಗೆ ಪೆಟ್ಟು ಬಿದ್ದು, ಚಾಸಾ-3 ರವರಿಗೆ ಬಲಗೈ, ಮೈ ಕೈಗೆ ನೋವಾಗಿದ್ದು, ನನಗೆ ಮೊಣಕಾಲಿನ ಹತ್ತಿರ ತರಚಿದ ಗಾಯಗಳು ಆಗಿರುತ್ತವೆ ಎಂದರೆ ಸರಿಯಲ್ಲ.

2. ಶಿವಮೂರ್ತಿಯನ್ನು ಧರ್ಮಪುರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗಕ್ಕೆ ಕರೆದುಕೊಂಡು ಹೋದಾಗ ವೈದ್ಯರು ಶಿವಮೂರ್ತಿ ಮೃತಪಟ್ಟಿರುವುದಾಗಿ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲೆ ಹೇಳಿದಂತೆ ದಿಃ12.09.2022 ರಂದು ಪೋಲಿಸರ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು **ನಿಪಿ-8** ಎಂದು ಗುರುತಿಸಲಾಯಿತು.

**ಪಾಟೀ-ಸವಾಲುಃ ಆರೋಪಿ ಪರ ಶ್ರೀ.ಎಂ ಆರ್ ಪಿ ಮತ್ತು ಜೆ ಸಿ ಪಿ ವಕೀಲರಿಂದಃ**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.